# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 546 |
| ಸದಸ್ಯರ ಹೆಸರು | ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 08.12.2023 |
| ಉತ್ತರಿಸಬೇಕಾದ ಸಚಿವರು | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು |
| ಪ್ರಶ್ನೆ | ಉತ್ತರ |
| (ಅ) ಬೆಳಗಾವಿಯಲ್ಲಿ ಐ.ಟಿ ಮತ್ತು ಬಿ.ಟಿ ಪಾರ್ಕ್ ಸ್ಥಾಪಿಸಲು ಸರ್ಕಾರ ಯಾವುದಾದರೂ ಕ್ರಮಗಳನ್ನು ಕೈಗೊಂಡಿದೆಯೇ; | ಬೆಳಗಾವಿಯಲ್ಲಿ ಐಟಿ ಪಾರ್ಕ್ ಸ್ಥಾಪಿಸುವ ಸಲುವಾಗಿ ಕೇಂದ್ರ ರಕ್ಷಣಾ ಮಂತ್ರಾಲಯದ ವಶದಲ್ಲಿರುವ ಜಮೀನನ್ನು ರಾಜ್ಯ ಸರ್ಕಾರದ ವಶಕ್ಕೆ ನೀಡುವ ಕುರಿತು ಕೇಂದ್ರ ಸರ್ಕಾರದೊಂದಿಗೆ ಪತ್ರ ವ್ಯವಹಾರ ನಡೆಸಲಾಗುತ್ತಿದ್ದು, ಸದರಿ ಜಮೀನನ್ನು ರಾಜ್ಯ ಸರ್ಕಾರದ ವಶಕ್ಕೆ ಪಡೆದ ನಂತರ ಬೆಳಗಾವಿಯಲ್ಲಿ ಐಟಿ ಪಾರ್ಕ್ ಸ್ಥಾಪಿಸುವ ಕುರಿತು ಪರಿಶೀಲಿಸಲಾಗುವುದು.<br>ಮುಂದುವರೆದು, ಬೆಳಗಾವಿಯಲ್ಲಿ ಬಿಟಿ ಪಾರ್ಕ್ ಸ್ಥಾಪನೆ ಸಂಬಂಧ ಯಾವುದೇ ಪ್ರಸ್ತಾವನೆಯು ಇಲಾಖೆಯಲ್ಲಿ ಸ್ವೀಕೃತವಾಗದೇ ಇರುವುದರಿಂದ ಬಿಟಿ ಪಾರ್ಕ್ ಸ್ಥಾಪಿಸಲು ಯಾವುದೇ ಕ್ರಮ ಕೈಗೊಂಡಿರುವುದಿಲ್ಲ. |
| (ಆ) ಈಗಾಗಲೇ ಬೆಳಗಾವಿಯಲ್ಲಿ ಸ್ಥಾಪಿಸಿರುವ ಐ.ಟಿ ಮತ್ತು ಬಿ.ಟಿ ಪಾರ್ಕ್‌ನ ಸ್ಥಿತಿಗತಿಗಳೇನು; | ಅನ್ವಯಿಸುವುದಿಲ್ಲ. |
| (ಇ) ಪ್ರಸ್ತುತ ಇರುವ ಐ.ಟಿ ಮತ್ತು ಬಿ.ಟಿ ಪಾರ್ಕ್‌ಗಳಲ್ಲಿ ಎಷ್ಟು ಉದ್ಯಮಗಳು ಕಾರ್ಯಚಟುವಟಿಕೆಗಳನ್ನು ಪ್ರಾರಂಭಿಸಿವೆ, ಉಳಿದ ಇನ್ನೆಷ್ಟು ಉದ್ಯಮಗಳು ಕಾರ್ಯಚಟುವಟಿಕೆಗಳನ್ನು ಪ್ರಾರಂಭಿಸಬೇಕಿದೆ; | ಅನ್ವಯಿಸುವುದಿಲ್ಲ. |
| (ಈ) ಬೆಳಗಾವಿಯಲ್ಲಿ ಐ.ಟಿ ಮತ್ತು ಬಿ.ಟಿ ಕ್ಷೇತ್ರಕ್ಕೆ ಒತ್ತು ನೀಡಿ ಉತ್ತರ ಕರ್ನಾಟಕ ಭಾಗದ ಸಾವಿರಾರು ನುರಿತ ಯುವಕ ಮತ್ತು ಯುವತಿಯರಿಗೆ ಉದ್ಯೋಗಾವಕಾಶ ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಅಧ್ಯಕ್ಷತೆಯಲ್ಲಿ Skill Advisory Committee for Emerging Technologies ಮತ್ತು Skill Advisory Committee for Emerging Technologies in Biotechnology ರಚಿಸಲಾಗಿದ್ದು, ಈ ಸಮಿತಿಯು ಶೀಘ್ರದಲ್ಲೇ ವರದಿಯನ್ನು ಸಲ್ಲಿಸುವ ನಿರೀಕ್ಷೆಯಿದೆ. ಇದರಿಂದ, ಐಟಿ ಮತ್ತು ಬಿಟಿ ಕ್ಷೇತ್ರಕ್ಕೆ ಒತ್ತು ನೀಡಿ, ಬೆಳಗಾವಿ ಸೇರಿದಂತೆ ಉತ್ತರ ಕರ್ನಾಟಕ ಭಾಗದ ಸಾವಿರಾರು ನುರಿತ ಯುವಕ ಮತ್ತು ಯುವತಿಯರಿಗೆ ಉದ್ಯೋಗಾವಕಾಶ ಕಲ್ಪಿಸಲಾಗುತ್ತಿದೆ.<br>ಇದಲ್ಲದೇ, ಈಗಾಗಲೇ ಉತ್ತರ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿರುವ ಕಾಲೇಜು/ಸಂಸ್ಥೆಗಳಲ್ಲಿ ವಿದ್ಯಾರ್ಥಿಗಳಿಗೆ ತಮ್ಮ ನಾವೀನ್ಯತೆ ಹಾಗೂ ಆವಿಷ್ಕಾರಗಳನ್ನು ಅಭಿವೃದ್ಧಿಪಡಿಸಲು ನ್ಯೂ ಏಜ್ ಇನ್ನೂವೇಶನ್ ನೆಟ್‌ವರ್ಕ್(NAIN) ಅನ್ನು ಸ್ಥಾಪಿಸಲಾಗಿದ್ದು, ಇದು ಯುವಜನರಿಗೆ ತಮ್ಮ ಕೌಶಲ್ಯವನ್ನು ತೀಕ್ಷ್ಣಗೊಳಿಸಲು ಮತ್ತು ಸೂಕ್ತ ಉದ್ಯೋಗವನ್ನು ಪಡೆಯಲು ಸಹಕಾರಿಯಾಗುತ್ತದೆ. |

(ಐಟಿಬಿಟಿ 79 ಎಲ್‌ಸಿಎಂ 2023)

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್,
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.



Generated from eOffice by VIJAYA KUMARA P.D, ITBT-IT-SA(VK), SENIOR ASSISTANT, ITBT SEC on 11/11/2024 05:14 PM